ಅ) ಇಲ್ಲ

ಆ) ಇದೆ

ಇ) 200

ಈ) ಸರ್ಕಾರದ ತೀವ್ರ ಪರಿಶೀಲನೆಯಲ್ಲಿದೆ

ಉ) ಇದೆ.

ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಿಗೆ ಸುಣ್ಣ ಬಣ್ಣ ಬಳಿಸದೇ ಇರುವುದು.

2423 - ಶ್ರೀ ಬಿ. ಶಿವರಾಮು (ಗಂಡಸಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ನಗರದ ಲಾಲ್‌ಬಾಗ್ ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿಗೃಹಗಳಲ್ಲಿ ಸಂಪೂರ್ಣವಾಗಿ ಸುಣ್ಣ ಬಣ್ಣ ಬಳಿಸದೇ ಸುಮಾರು ವರ್ಷಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದಲ್ಲಿ ಸದರಿ ಕಾರ್ಯಕ್ಕಾಗಿ ತಯಾರಿಸಿದ ಅಂದಾಜು ವೆಚ್ಚವೆಷ್ಟು ಹಾಗೂ ಯಾವಾಗ ಸದರಿ ಕಾರ್ಯವನ್ನು ಕೈಗೊಳ್ಳಲಾಗುವುದು?*

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಸದಿರ ವಸತಿಗೃಹಗಳ ಸುಣ್ಣ ಬಣ್ಣ ಹಾಗೂ ದುರಸ್ತಿಗಾಗಿ 2.40 ಲಕ್ಷ ರೂ.ಗಳು ಬೇಕಾಗುತ್ತದೆ. ಈ ಸ್ಥಳದಲ್ಲಿರುವ ಎಲ್ಲಾ ವಸತಿಗೃಹಗಳ ವಾರ್ಷಿಕ ನಿರ್ವಹಣೆಗಾಗಿ 40,000 ಅನುದಾನ ನಿಗದಿಪಡಿಸಲಾಗಿದೆ. ಆದ್ದರಿಂದ ಅನುದಾನದ ಲಭ್ಯತೆಯನ್ನು ಆಧರಿಸಿ ಆದ್ಯತೆಯ ಮೇಲೆ ಸುಣ್ಣ ಬಣ್ಣ ಕಾಮಗಾರಿಗಳನ್ನು ಕೈಗೊಳ್ಳಲು ಪರಿಶೀಲಿಸಲಾಗುವುದು.

ಲಾಲ್‌ಬಾಗ್ ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳು

2422 - ಶ್ರೀ ಬಿ. ಶಿವರಾಮು (ಗಂಡಸಿ) : ಮಾನ್ಯ ಲೋಕೋಪಯೋಗಿ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ನಗರದಲ್ಲಿರುವ ಲಾಲ್‌ಬಾಗ್ -ಸಿದ್ದಾಪುರದಲ್ಲಿರುವ ಲೋಕೋಪಯೋಗಿ ಇಲಾಖೆಯ ವಸತಿ ಗೃಹಗಳಲ್ಲಿ ಬ್ಲಾಕ್ ನಂ.3 ಹಾಗೂ 2-1 ರಲ್ಲಿ ಕಾಂಪೌಂಡ್‌ಗಳ ಬಾಗಿಲುಗಳು ಮುರಿದು ಹೋಗಿರುವುದು ಹಾಗೂ ಅಲ್ಲಿನ ಆಂಗಳವು ಸಮತಳವಾಗಿಲ್ಲದೆ ಇರುವುದರಿಂದ ನಿವಾಸಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.*

ಆ) *ಹಾಗಿದ್ದಲ್ಲಿ ಕೂಡಲೇ ಸದರಿ ಗೇಟ್‌ಗಳನ್ನು ಹಾಗೂ ಆವರಣವನ್ನು ಸಮತಳ ಮಾಡಿಸಲು ಕ್ರಮ ಕೈಗೊಳ್ಳಲಾಗುವುದೇ?*

ಶ್ರೀ ಶಿವಾನಂದ ಹೆಚ್. ಕೌಜಲಗಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲಾಗುವುದು.